ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಪ್ರಸಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 6/12/19

# ಸಾಲುಮರದ ತಿಮ್ಮಕ್ಕಗೆ ಅಬ್ಬೆ ಪ್ರಶಸ್ತಿ

**ಬೀಳಗಿ (ಬಾಗಲಕೋಟೆ):** ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಎಸ್.ಆರ್. ಪಾಟೀಲ ಅವರ ಹೆಸರಿನ ಪ್ರತಿಷ್ಠಾನದಿಂದ ನೀಡುವ ಎರಡು ಪ್ರಶಸ್ತಿಗಳಿಗೆ ಪರಿಸರ ಪ್ರೇಮಿ ಸಾಲುಮರದ ತಿಮ್ಮಕ್ಕ ಹಾಗೂ ಕೃಷಿಕ ಮಹಾದೇವಪ್ಪ ಚಲವಾದಿ ಅವರನ್ನು ಆಯ್ಕೆ ಮಾಡಲಾಗಿದೆ.

ಬಾಡಗಂಡಿಯ ಎಸ್.ಆರ್.ಪಾಟೀಲ ಶಿಕ್ಷಣ ಪ್ರತಿಷ್ಠಾನ ಸಂಸ್ಥಾಪಕ ಅಧ್ಯಕ್ಷ ಎಸ್.ಆರ್.ಪಾಟೀಲರ ಮಾತಾಪಿತೃಗಳಾದ ದಿ.ರುದ್ರಗೌಡ ಗುರುಸಿದ್ದಪ್ಪಗೌಡ ಪಾಟೀಲ ಅವರ ಸ್ಮರಣಾರ್ಥ ಕೃಷಿ ಪ್ರಶಸ್ತಿಗೆ ಬೀಳಗಿ ತಾಲೂಕಿನ ರೊಳ್ಳಿ ಗ್ರಾಮದ ಮಹಾದೇವಪ್ಪ ಚಲವಾದಿ ಅವರನ್ನು ಆಯ್ಕೆ ಮಾಡಲಾಗಿದೆ. ಹಾಗೂ ದಿ. ಶ್ರೀಮತಿ ಈರಮ್ಮ ರುದ್ರಗೌಡ ಪಾಟೀಲ ಸ್ಮರಣಾರ್ಥ ಅಬ್ಬೆ ಪ್ರಶಸ್ತಿಗೆ ಸಾಲುಮರದ ತಿಮ್ಮಕ್ಕ ಅವರನ್ನು ಆರಿಸಲಾಗಿದೆ ಎಂದು ಸಂಸ್ಥೆಯ ಆಡಳಿತಾಧಿಕಾರಿ ಎಚ್.ಬಿ. ಧರ್ಮಣ್ಣವರ್ ತಿಳಿಸಿದ್ದಾರೆ.



ಪ್ರತಿ ವರ್ಷದಂತೆ ಈ ಬಾರಿಯೂ ಡಿ.7ರಂದು ಬೀಳಗಿ ಸಮೀಪದ ಬಾಡಗಂಡಿ ಬಾಪೂಜಿ ಅಂತರರಾಷ್ಟ್ರೀಯ ವಸತಿ ಶಾಲೆ ಹಾಗೂ ಬಾಪೂಜಿ ಸ್ವತಂತ್ರ ಪದವಿಪೂರ್ವ ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಆವರಣದಲ್ಲಿ ಕಾರ್ಯಕ್ರಮ ನಡೆಯಲಿದೆ. ಸಾರ್ಥಕ ಸಂಭ್ರಮ-10 ಮತ್ತು ಸಾರ್ಥಕ ನುಡಿ ನಮನ-08 ಕಾರ್ಯಕ್ರಮದಲ್ಲಿ ಕೃಷಿ ಪ್ರಶಸ್ತಿ, ಅಬ್ಬೆ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ. ಸಾರ್ವಜನಿಕ ಶಿಕ್ಷಣ ಇಲಾಖೆ ಅಪರ ಆಯುಕ್ತ ಮೇಜರ್ ಸಿದ್ದಲಿಂಗಯ್ಯ ಹಿರೇಮಠ್ ಕಾರ್ಯಕ್ರಮ ಉದ್ಘಾಟಿಸಿ ಪ್ರಶಸ್ತಿ ಪ್ರದಾನ ಮಾಡುವರು. ಎಸ್.ಆರ್.ಪಾಟೀಲ್ ಅಧ್ಯಕ್ಷತೆ ವಹಿಸುವರು ಎಂದರು.